**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀ ಶಿವಪ್ಪ, ಅಧ್ಯಕ್ಷರು, ದುಗ್ಗಹಳ್ಳಿ ಗ್ರಾಮ ಪಂಚಾಯಿತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi)ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ:ಡಿವಿಇ3/72/2018-19, ದಿನಾಂಕ:26.12.2018.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:08.02.2019.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್:10/2018-19, ದಿನಾಂಕ:16.04.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 396 ಗ್ರಾಪಂಅ 2020, ದಿನಾಂಕ:16.05.2020.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ಪತ್ರ ಸಂಖ್ಯೆ:ತಾಪಂನ/ಗ್ರಾಪಂಶಾ/ಸ್ವೀಕೃತಿ ಪ್ರ/02/2020-21, ದಿನಾಂಕ:06.06.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ 396 ಗ್ರಾಪಂಅ 2020, ದಿನಾಂಕ:27.01.2021 ಮತ್ತು 18.02.2021.

***

ಶ್ರೀ ಶಿವಪ್ಪ, ಹಿಂದಿನ ಅಧ್ಯಕ್ಷರು, ದುಗ್ಗಹಳ್ಳಿ ಗ್ರಾಮ ಪಂಚಾಯಿತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರು (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ಇವರು ಮೇಲೆ ಓದಲಾದ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

14ನೇ ಹಣಕಾಸು ಯೋಜನೆಯಡಿಯಲ್ಲಿ ಮೆ. ಪ್ರಕಾಶ್ ಎಲೆಕ್ಟ್ರಿಕಲ್ಸ್ ಮತ್ತು ರಾಜೇಶ್ ಎಲೆಕ್ಟ್ರಿಕಲ್ಸ್ ನಂಜನಗೂಡು ರವರುಗಳಿಂದ ರೂ. 12,01,765/-ಗಳಿಗೆ ಕುಡಿಯುವ ನೀರಿನ ಸಾಮಗ್ರಿಗಳು ಹಾಗೂ ಬೀದಿ ದೀಪಗಳನ್ನು ಖರೀದಿಸಲಾಗಿದೆ ಈ ಪೈಕಿ ರೂ. 11,77,260/-ಗಳ ಖರೀದಿ ಪ್ರಕ್ರಿಯೆಯಲ್ಲಿ ಕೆ.ಟಿ.ಪಿ.ಪಿ ಕಾಯ್ದೆಯನ್ನು ಉಲ್ಲಂಘಿಸಲಾಗಿದೆ. ಖರೀದಿ ಪ್ರಕ್ರಿಯೆಯಲ್ಲಿ ಯಾವುದೇ ದರ ಪಟ್ಟಿ ಇಲ್ಲದಿರುವುದು, ಸರಬರಾಜು ಆದೇಶ ಇಲ್ಲದಿರುವುದು ಹಾಗೂ ಬಿಲ್ಲುಗಳಲ್ಲಿ ದಿನಾಂಕ ನಮೂದಿಸಿರುವುದಿಲ್ಲ.

ಸದರಿ ಆರೋಪಕ್ಕೆ ಸಂಬಂಧಿಸಿದಂತೆ ಎದುರುದಾರರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಕಲಂ 48(4) ರನ್ವಯ ಮುಂದಿನ ಕ್ರಮವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಓದಲಾದ (2)ರಲ್ಲಿ ಆಯಾ ವಿಭಾಗದ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದ (3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀ ಶಿವಪ್ಪ, ಹಿಂದಿನ ಅಧ್ಯಕ್ಷರು, ದುಗ್ಗಹಳ್ಳಿ ಗ್ರಾಮ ಪಂಚಾಯಿತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರು ತಮ್ಮ ವಿರುದ್ಧದ ಆರೋಪವನ್ನು ತಳ್ಳಿಹಾಕಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಿಗೆ ಮೇಲೆ ಓದಲಾದ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಸದರಿಯವರು ಲಿಖಿತ ಸಮಜಾಯಿಷಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಅಲ್ಲದೇ, ಎದುರುದಾರರಿಗೆ ಎರಡನೇ ಕಾರಣ ಕೇಳುವ ನೋಟಿಸನ್ನು ಜಾರಿಗೊಳಿಸಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ನಂಜನಗೂಡು ಇವರು ಮೇಲೆ ಓದಲಾದ (6) ರಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದ (7)ರಲ್ಲಿ ವಿಚಾರಣಾ ನೋಟಿಸನ್ನು ಜಾರಿ ಮಾಡಿ, ಪ್ರಕರಣವನ್ನು ದಿನಾಂಕ:15.03.2021 ರಂದು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಯಿತು. ಎದುರುದಾರರಾದ ಶ್ರೀ ಶಿವಪ್ಪ, ಹಿಂದಿನ ಅಧ್ಯಕ್ಷರು, ಸದರಿ ವಿಚಾರಣೆಗೆ ಹಾಜರಾಗಿ, ತಾನು ಅನಕ್ಷರಸ್ಥನಾಗಿದ್ದು, ಖರೀದಿ ಪ್ರಕ್ರಿಯೆ ಬಗ್ಗೆ ತಿಳುವಳಿಕೆ ಕೊರತೆಯಿಂದಾಗಿ, ಸಹಿ ಮಾಡಿರುವುದಾಗಿ, ಮೌಖಿಕ ಹೇಳಿಕೆ ನೀಡಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಿದಾಗ, ಎದುರುದಾರರು ತಮ್ಮ ಅಧಿಕಾರಾವದಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ

ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2020 ರಪ್ರಕರಣ 43(ಎ)(vi) ರಡಿ ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ದುಗ್ಗಹಳ್ಳಿ ಗ್ರಾಮ ಪಂಚಾಯಿತಿಯ ಹಿಂದಿನ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 396 ಗ್ರಾಪಂಅ 2020, ಬೆಂಗಳೂರು, ದಿನಾಂಕ:30.08.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಶಿವಪ್ಪ, ಹಿಂದಿನ ಅಧ್ಯಕ್ಷರು, ದುಗ್ಗಹಳ್ಳಿ ಗ್ರಾಮ ಪಂಚಾಯಿತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ–1993ರ ಪ್ರಕರಣ 43(ಎ)(vi) ರಡಿ ಹಾಗೂ ಪ್ರಕರಣ 12(ಎಲ್) ರನ್ವಯ ಸದರಿಯವರು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/8/21
(ಚೇತನ ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ,(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

30/08/21

ಗೆ:

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
2) ಆಯುಕ್ತರು, ಪಂಚಾಯತ್‌ರಾಜ್ ಆಯುಕ್ತಾಲಯ, ಕೆ.ಜಿರಸ್ತೆ, ಬೆಂಗಳೂರು.–09
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ.
4) ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ನಂಜನಗೂಡು, ಮೈಸೂರು ಜಿಲ್ಲೆ.
5) ಶ್ರೀ ಶಿವಪ್ಪ, ಹಿಂದಿನ ಅಧ್ಯಕ್ಷರು, ದುಗ್ಗಹಳ್ಳಿ ಗ್ರಾಮ ಪಂಚಾಯಿತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.
6) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್–1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.